**All India Radio: Bangalore**
**National Bulletin In Kannada**
**28.06.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**28.06.2026 1.10 p.m.**

**<><><><>**

ಮುಖ್ಯಾಂಶಗಳು

1. ಪಶ್ಚಿಮ ಏಷ್ಯಾದ ಸಂಘರ್ಷ ಹಿನ್ನೆಲೆ: ತಾವು ನೀಡಿದ್ದ ಮನವಿಗೆ ಸ್ಪಂದಿಸಿದ ದೇಶದ ಜನತಗೆ ಮನದ ಮಾತಿನಲ್ಲಿ ಕೃತಜ್ಞತೆ ಸಲ್ಲಿಸಿದ ಪ್ರಧಾನಿ ನರೇಂದ್ರ ಮೋದಿ
2. 'ಕ್ಯಾಚ್ ದ ರೇನ್' ಅಭಿಯಾನದಡಿ ಮಳೆಯ ಪ್ರತಿಯೊಂದು ಹನಿಯನ್ನೂ ಸಂರಕ್ಷಿಸುವಂತೆ ಪ್ರಧಾನಿ ದೇಶದ ಜನತೆಗೆ ಕರೆ
3. ದೇಶಾದ್ಯಂತ ಇಂದಿನಿಂದ ಜುಲೈ ೧ರವರಗೆ ಪಲ್ಸ್ ಪೋಲಿಯೋ ಅಭಿಯಾನ; ಲಸಿಕೆಯಿಂದ ಯಾವುದೇ ಮಗು ವಂಚಿತವಾಗದಂತೆ ಸರ್ಕಾರದಿಂದ ಕ್ರಮ
4. ನಶಾಮುಕ್ತ ಭಾರತವನ್ನಾಗಿಸುವಲ್ಲಿ ಯುವಜನತೆ ಪ್ರತಿಜ್ಞೆ ಮಾಡುವಂತೆ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಕರೆ
5. ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್; ಇಂದು ಭಾರತ-ಆಸ್ಟ್ರೇಲಿಯಾ ಮುಖಾಮುಖಿ

<><><><>

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಇಂದು ಆಕಾಶವಾಣಿಯ ಜನಪ್ರಿಯ ಕಾರ್ಯಕ್ರಮ ಮನ್ ಕಿ ಬಾತ್ ಕಾರ್ಯಕ್ರಮದಲ್ಲಿ ದೇಶದ ಭದ್ರತೆ, ಸ್ವಾವಲಂಬನೆ, ಜನಸಹಭಾಗಿತ್ವ, ಪರಿಸರ ಸಂರಕ್ಷಣೆ, ಕ್ರೀಡೆ, ತಂತ್ರಜ್ಞಾನ ಹಾಗೂ ಭಾರತೀಯ ಸಂಸ್ಕೃತಿಯ ಜಾಗತಿಕ ವಿಸ್ತರಣೆ ಸೇರಿದಂತೆ ಹಲವು ಮಹತ್ವದ ವಿಷಯಗಳ ಕುರಿತು ದೇಶವನ್ನು ಉದ್ದೇಶಿಸಿ ಮಾತನಾಡಿದರು. ಜೂನ್ ತಿಂಗಳಲ್ಲಿ ದೇಶ ವಿವಿಧ ಕ್ಷೇತ್ರಗಳಲ್ಲಿ ಗಮನಾರ್ಹ ಸಾಧನೆಗಳನ್ನು ದಾಖಲಿಸಿದ್ದು, ಈ ಯಶಸ್ಸುಗಳು ಆತ್ಮನಿರ್ಭರ ಭಾರತದ ಸಂಕಲ್ಪವನ್ನು ಮತ್ತಷ್ಟು ಬಲಪಡಿಸಿವೆ ಎಂದು ಅವರು ಹೇಳಿದರು. ದೇಶದ ರಕ್ಷಣಾ ಸಾಮರ್ಥ್ಯ ವೃದ್ಧಿಯಾಗುತ್ತಿರುವುದನ್ನು ಉಲ್ಲೇಖಿಸಿದ ಪ್ರಧಾನಿ, ಕೋಲ್ಕತ್ತಾದಲ್ಲಿ ಭಾರತೀಯ ನೌಕಾಪಡೆಗೆ ಸ್ವದೇಶಿ ನಿರ್ಮಿತ ಐಎನ್‌ಎಸ್ ದೂನಗಿರಿ, ಐಎನ್‌ಎಸ್ ಸಂಶೋಧಕ್ ಮತ್ತು ಐಎನ್‌ಎಸ್ ಅಗ್ರಯ ಯುದ್ಧನೌಕೆಗಳನ್ನು ಸೇರ್ಪಡೆಗೊಳಿಸಿರುವುದನ್ನು

ಪ್ರಸ್ತಾಪಿಸಿದರು. ಭಾರತದಲ್ಲೇ ನಿರ್ಮಾಣಗೊಂಡ ಸಿ-೨೯೫ ವಿಮಾನ ಮೊದಲ ಯಶಸ್ವಿ ಹಾರಾಟ ನಡೆಸಿರುವುದು ಹಾಗೂ ಇನ್ನೂ ೪೦ ವಿಮಾನಗಳ ನಿರ್ಮಾಣ ಕಾರ್ಯ ನಡೆಯುತ್ತಿರುವುದರಿಂದ ಎಂಎಸ್‌ಎಂಇ ಮತ್ತು ಏರೋಸ್ಪೇಸ್ ಕ್ಷೇತ್ರಕ್ಕೆ ಹೊಸ ಉತ್ತೇಜನ ದೊರೆಯಲಿದೆ ಎಂದರು. ಅಲ್ಲದೇ, ಡಿಆರ್‌ಡಿಒ ಅಭಿವೃದ್ಧಿಪಡಿಸಿರುವ ಲಾಂಗ್ ರೇಂಜ್ ಲ್ಯಾಂಡ್ ಅಟ್ಯಾಕ್ ಕ್ರೂಸ್ ಕ್ಷಿಪಣಿಯ ಯಶಸ್ವಿ ಪರೀಕ್ಷೆಯನ್ನೂ ಅವರು ಉಲ್ಲೇಖಿಸಿದರು. ಅಂತಾರಾಷ್ಟ್ರೀಯ ಯೋಗ ದಿನಾಚರಣೆಯು ಈ ಬಾರಿ ವಿಶ್ವದ ೨ ಸಾವಿರದ ೫೦೦ಕ್ಕೂ ಹೆಚ್ಚು ಸ್ಥಳಗಳಲ್ಲಿ ಯಶಸ್ವಿಯಾಗಿ ಆಚರಿಸಲ್ಪಟ್ಟಿರುವುದನ್ನು ಪ್ರಧಾನಿ ಶ್ಲಾಘಿಸಿದರು. ಅಹಮದಾಬಾದ್‌ನಲ್ಲಿ ನಡೆದ ವಿಶ್ವ ಯೋಗಾಸನ ಚಾಂಪಿಯನ್‌ಶಿಪ್‌ನಲ್ಲಿ ಭಾರತ ೧೦೨ ಚಿನ್ನ ಸೇರಿದಂತೆ ೧೧೪ ಪದಕಗಳನ್ನು ಗೆದ್ದು ಅಗ್ರಸ್ಥಾನ ಪಡೆದಿರುವುದಕ್ಕೆ ಕ್ರೀಡಾಪಟುಗಳನ್ನು ಪ್ರಧಾನಿ ಅಭಿನಂದಿಸಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ೧೫ ಸೆಕೆಂಡ್ಸ್)**

ಪಶ್ಚಿಮ ಏಷ್ಯಾದ ಯುದ್ಧ ಪರಿಸ್ಥಿತಿಯ ಹಿನ್ನೆಲೆಯಲ್ಲಿ ಚಿನ್ನ ಖರೀದಿಯನ್ನು ಮುಂದೂಡುವುದು, ವಿದೇಶ ಪ್ರವಾಸವನ್ನು ತಾತ್ಕಾಲಿಕವಾಗಿ ಕೈಬಿಡುವುದು, ಕಾರ್‌ಪೂಲಿಂಗ್‌ಗೆ ಆದ್ಯತೆ ನೀಡುವುದು ಹಾಗೂ ರಾಸಾಯನಿಕ ಮುಕ್ತ ಕೃಷಿಯನ್ನು ಅಳವಡಿಸಿಕೊಳ್ಳುವಂತೆ ತಾವು ಮಾಡಿದ ಮನವಿಗೆ ದೇಶದ ಜನತೆ ವ್ಯಾಪಕವಾಗಿ ಸ್ಪಂದಿಸಿರುವುದಕ್ಕೆ ಪ್ರಧಾನಿ ಕೃತಜ್ಞತೆ ಸಲ್ಲಿಸಿದರು. ಇದರಿಂದ ಇಂಧನ ಉಳಿತಾಯವಾಗುತ್ತಿದ್ದು, ನೈಸರ್ಗಿಕ ಗೊಬ್ಬರ ಬಳಕೆಯೂ ಹೆಚ್ಚುತ್ತಿದೆ ಎಂದು ಹೇಳಿದರು.

**ಧ್ವನಿ: ಪ್ರಧಾನಿ ನರೇಂದ್ರ ಮೋದಿ ( ३४ ಸೆಕೆಂಡ್ಸ್ ) ಪಶ್ಚಿಮ ಏಷ್ಯಾ**

ಮಹಾರಾಷ್ಟ್ರದ ನಾಂದೇಡ್ ಜಿಲ್ಲೆಯ ಪೇಠ್ಕರ್ ಕುಟುಂಬವು ಮದುವೆ ಸಂದರ್ಭದಲ್ಲಿ ಗ್ರಾಮದ ಸುಮಾರು ೩ ಸಾವಿರದ ೫೦೦ ಜನರಿಗೆ ಅಪಘಾತ ವಿಮೆ ಮಾಡಿಸಿರುವುದನ್ನು ಪ್ರಧಾನಿ ಶ್ಲಾಘಿಸಿದರು. ಇದೇ ವೇಳೆ, ಪ್ರಧಾನಮಂತ್ರಿ ಸುರಕ್ಷಾ ಬಿಮಾ ಯೋಜನೆ ಮತ್ತು ಪ್ರಧಾನಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆಗಳ ಮೂಲಕ ಕೋಟ್ಯಂತರ ಜನರಿಗೆ ಸಾಮಾಜಿಕ ಭದ್ರತೆ ಒದಗಿಸಿರುವುದನ್ನು ಉಲ್ಲೇಖಿಸಿದ ಅವರು, ಈ ಯೋಜನೆಗಳ ಪ್ರಯೋಜನವನ್ನು ಪ್ರತಿಯೊಬ್ಬರೂ ಪಡೆಯುವಂತೆ ಕರೆ ನೀಡಿದರು.

೨೮.೦೬.೨೦೨೬ ರಾಷ್ಟ್ರೀಯ ವಾರ್ತೆಗಳು ೧.೧೦ ಮನ್ ಕಿ ಬಾತ್-೩

ಸಮಾಜದಲ್ಲಿರುವ ಮೂಢನಂಬಿಕೆಗಳನ್ನು ವೈಜ್ಞಾನಿಕ ಚಿಂತನೆಯ ಮೂಲಕ ನಿವಾರಿಸುವ ಅಗತ್ಯವನ್ನು ಒತ್ತಿ ಹೇಳಿದ ಪ್ರಧಾನಿ, ಅಸ್ಸಾಂನಲ್ಲಿ ಹರ್ಗಿಲಾ ಪಕ್ಷಿ ಸಂರಕ್ಷಣೆಗೆ ಜೀವಶಾಸ್ತ್ರಜ್ಞೆ ಪೂರ್ಣಿಮಾ ದೇವಿ ಬರ್ಮನ್ ನೇತೃತ್ವದಲ್ಲಿ ರೂಪುಗೊಂಡಿರುವ 'ಹರ್ಗಿಲಾ ಆರ್ಮಿ'ಯ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಿದರು. ದೇಶದಲ್ಲಿ ಕ್ರೀಡಾ ಸಂಸ್ಕೃತಿ ಬೆಳೆಯುತ್ತಿರುವುದನ್ನು ಉಲ್ಲೇಖಿಸಿದ ಪ್ರಧಾನಿ, ನಾಗಾಲ್ಯಾಂಡ್‌ನಲ್ಲಿ ಯಶಸ್ವಿಯಾಗಿ ನಡೆಯುತ್ತಿರುವ ನಾಗಾಲ್ಯಾಂಡ್ ಬೇಬಿ ಲೀಗ್ ಹಾಗೂ ನಾಗಾಲ್ಯಾಂಡ್ ಮಹಿಳಾ ಫುಟ್ಸಲ್ ಲೀಗ್‌ಗಳನ್ನು ಶ್ಲಾಘಿಸಿದರು. ತಂತ್ರಜ್ಞಾನ ಮತ್ತು ಭಾರತೀಯ ಜ್ಞಾನ ಪರಂಪರೆಯ ಸಮನ್ವಯದ ಕುರಿತು ಮಾತನಾಡಿದ ಪ್ರಧಾನಿ, ನಳಂದಾ ವಿಶ್ವವಿದ್ಯಾಲಯದಲ್ಲಿ ತಾರ್ಕಿಕ ಚರ್ಚೆಯ ಸಂಪ್ರದಾಯ ಪುನರುಜ್ಜೀವನಗೊಳ್ಳುತ್ತಿರುವುದನ್ನು ಹಾಗೂ ಕೇಂದ್ರೀಯ ಸಂಸ್ಕೃತ ವಿಶ್ವವಿದ್ಯಾಲಯ ಕೃತಕ ಬುದ್ಧಿಮತ್ತೆ ಮತ್ತು ದತ್ತಾಂಶ ವಿಜ್ಞಾನದಲ್ಲಿ ಬಿ.ಟೆಕ್ ಕೋರ್ಸ್ ಆರಂಭಿಸಿರುವುದನ್ನು ಶ್ಲಾಘಿಸಿದರು. ಡೊಮಿನಿಕನ್ ರಿಪಬ್ಲಿಕ್‌ನಲ್ಲಿ 'ಬ್ರಹ್ಮಕಮಲ್ ಡೊಮಿನಿಕಾನಾ' ತಂಡವು ವೈದಿಕ ಮಂತ್ರಗಳ ಅಧ್ಯಯನ ಮತ್ತು ಭಾರತೀಯ ಆಧ್ಯಾತ್ಮಿಕ ಪರಂಪರೆಯ ಪ್ರಸಾರದಲ್ಲಿ ತೊಡಗಿಸಿಕೊಂಡಿರುವುದನ್ನು ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದರು. ವಿಶ್ವದ ವಿವಿಧ ಭಾಗಗಳಲ್ಲಿ ಭಾರತೀಯ ಸಂಸ್ಕೃತಿಗೆ ಹೆಚ್ಚುತ್ತಿರುವ ಗೌರವ ಸಂತಸದ ವಿಷಯ ಎಂದು ಹೇಳಿದರು. ಮೇಘಾಲಯದ ಜೀವಂತ ಬೇರು ಸೇತುವೆಗಳ ವೈಶಿಷ್ಟ್ಯವನ್ನು ವಿವರಿಸಿದ ಪ್ರಧಾನಿ, ಅವುಗಳನ್ನು ಯುನೆಸ್ಕೋ ವಿಶ್ವ ಪಾರಂಪರಿಕ ಜಾಲಕ್ಕೆ ಸೇರಿಸಲು ಭಾರತ ಅರ್ಜಿ ಸಲ್ಲಿಸಿರುವುದಾಗಿ ತಿಳಿಸಿದರು. ಈ ಸೇತುವೆಗಳ ಸಂರಕ್ಷಣೆಯಲ್ಲಿ ಸ್ಥಳೀಯ ಸಮುದಾಯಗಳು ಮತ್ತು ಪದ್ಮ ಪ್ರಶಸ್ತಿ ಪುರಸ್ಕೃತ ಹ್ಯಾಲಿ ವಾರ್ ಜೀ ಅವರ ಕೊಡುಗೆಯನ್ನು ಶ್ಲಾಘಿಸಿದರು. ಮಧ್ಯಪ್ರದೇಶದ ರಾಜಗಢ ಜಿಲ್ಲೆಯ ಮಹಿಳೆಯರು ಪ್ಲಾಸ್ಟಿಕ್ ತ್ಯಾಜ್ಯವನ್ನು ಪರಿಸರ ಸ್ನೇಹಿ ಇಟ್ಟಿಗೆಗಳಾಗಿ ಪರಿವರ್ತಿಸಿ ಸಾರ್ವಜನಿಕ ಬಳಕೆಗೆ ಒದಗಿಸುತ್ತಿರುವ ಕಾರ್ಯವನ್ನು ಪ್ರಧಾನಿ ಶ್ಲಾಘಿಸಿದರು. ಮುಂಬರುವ ಗಣೇಶೋತ್ಸವದ ಹಿನ್ನೆಲೆಯಲ್ಲಿ ಸ್ಥಳೀಯ ಕುಂಬಾರರು ತಯಾರಿಸಿದ ಜೇಡಿಮಣ್ಣಿನ ಗಣೇಶ ಮೂರ್ತಿಗಳಿಗೆ ಆದ್ಯತೆ ನೀಡುವಂತೆ ಹಾಗೂ ಪ್ಲಾಸ್ಟರ್ ಆಫ್ ಪ್ಯಾರಿಸ್‌ನ ಮೂರ್ತಿಗಳನ್ನು ಬಳಸಬಾರದೆಂದು ಪ್ರಧಾನಿ ಮನವಿ ಮಾಡಿದರು. ಇದರಿಂದ ಪರಿಸರ ಸಂರಕ್ಷಣೆ ಹಾಗೂ 'ವೋಕಲ್ ಫಾರ್ ಲೋಕಲ್' ಅಭಿಯಾನಕ್ಕೆ ಬಲ ಸಿಗಲಿದೆ ಎಂದು ಹೇಳಿದರು. ಕಾರ್ಯಕ್ರಮದ ಕೊನೆಯಲ್ಲಿ, ದೇಶದ ಅಭಿವೃದ್ಧಿಯಲ್ಲಿ ಜನಸಹಭಾಗಿತ್ವವೇ ಪ್ರಮುಖ ಶಕ್ತಿಯಾಗಿದ್ದು,

'ಕ್ಯಾಚ್ ದ ರೇನ್' ಅಭಿಯಾನದಡಿ ಮಳೆಯ ಪ್ರತಿಯೊಂದು ಹನಿಯನ್ನೂ ಸಂರಕ್ಷಿಸುವಂತೆ ಪ್ರಧಾನಿ ದೇಶದ ಜನತೆಗೆ ಕರೆ ನೀಡಿದರು.

<><><>

ದೇಶಾದ್ಯಂತ ಇಂದು ರಾಷ್ಟ್ರೀಯ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಆರಂಭಗೊಂಡಿದೆ. ಐದು ವರ್ಷದೊಳಗಿನ ಎಲ್ಲ ಮಕ್ಕಳಿಗೂ ಎರಡು ಹನಿ ಪೋಲಿಯೋ ಲಸಿಕೆ ನೀಡುವ ಉದ್ದೇಶದಿಂದ ಈ ಅಭಿಯಾನವನ್ನು ಜುಲೈ ೧ರವರೆಗೆ ಹಮ್ಮಿಕೊಳ್ಳಲಾಗಿದೆ. ಮೊದಲ ದಿನ ಸರ್ಕಾರಿ ಆಸ್ಪತ್ರೆಗಳು, ಪ್ರಾಥಮಿಕ ಆರೋಗ್ಯ ಕೇಂದ್ರಗಳು, ಅಂಗನವಾಡಿ ಕೇಂದ್ರಗಳು ಹಾಗೂ ವಿಶೇಷ ಲಸಿಕಾ ಕೇಂದ್ರಗಳಲ್ಲಿ ಮಕ್ಕಳಿಗೆ ಲಸಿಕೆ ನೀಡಲಾಗುತ್ತಿದೆ. ನಾಳೆಯಿಂದ ಜುಲೈ ೧ರವರೆಗೆ ಆರೋಗ್ಯ ಸಿಬ್ಬಂದಿ ಮನೆ-ಮನೆಗೆ ತೆರಳಿ ಲಸಿಕೆ ನೀಡಲಿದ್ದಾರೆ. ಯಾವುದೇ ಮಗು ಲಸಿಕೆಯಿಂದ ವಂಚಿತವಾಗಬಾರದೆಂದು ಕ್ರಮ ಕೈಗೊಳ್ಳಲಾಗಿದೆ. ಐದು ವರ್ಷದೊಳಗಿನ ಎಲ್ಲಾ ಮಕ್ಕಳಿಗೂ ತಪ್ಪದೇ ಪೋಲಿಯೋ ಲಸಿಕೆ ಹಾಕಿಸುವಂತೆ ಹಾಗೂ ದೇಶವನ್ನು ಪೋಲಿಯೋ ಮುಕ್ತವಾಗಿಡುವಲ್ಲಿ ಸಾರ್ವಜನಿಕರ ಸಹಕಾರ ಅಗತ್ಯ ಎಂದು ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವಾಲಯ ಪೋಷಕರಿಗೆ ಮನವಿ ಮಾಡಿದೆ.

<><><>

ಬೆಂಗಳೂರಿನಲ್ಲಿಂದು ರಾಜೀವ್ ಗಾಂಧಿ ಆರೋಗ್ಯ ವಿಜ್ಞಾನಗಳ ವಿಶ್ವವಿದ್ಯಾಲಯದ ಸಂಸ್ಥಾಪನಾ ದಿನಾಚರಣೆ ಹಾಗೂ ಅಂತಾರಾಷ್ಟ್ರೀಯ ಮಾದಕವಸ್ತು ವಿರೋಧಿ ಮತ್ತು ಅಕ್ರಮ ಸಾಗಣೆ ತಡೆ ದಿನಾಚರಣೆ ಕಾರ್ಯಕ್ರಮದ ಅಂಗವಾಗಿ ಹಮ್ಮಿಕೊಳ್ಳಲಾಗಿದ್ದ ನಶಾ ಮುಕ್ತ ಭಾರತ ಕಾರ್ಯಕ್ರಮದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಭಾಗಿಯಾಗಿದ್ದರು. ಈ ಸಂದರ್ಭದಲ್ಲಿ ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹಾಗೂ ಗಣ್ಯರು ಮಕ್ಕಳಿಗೆ ಎರಡು ಹನಿ ಪಲ್ಸ್ ಪೋಲಿಯೋ ಲಸಿಕೆಯನ್ನು ಹಾಕಿದರು. ಬಳಿಕ ಮಾತನಾಡಿದ ಉಪರಾಷ್ಟ್ರಪತಿ ಅವರು, ಮಾದಕ ದ್ರವ್ಯ ವ್ಯಸನದಿಂದ ದೂರವಿರುವಂತೆ ಹಾಗೂ ನಶಾಮುಕ್ತ ಭಾರತವನ್ನಾಗಿಸುವಲ್ಲಿ ಯುವಜನತೆ ಪ್ರತಿಜ್ಞೆ ಮಾಡುವಂತೆ ಕರೆ ನೀಡಿದರೆ. ಕಾರ್ಯಕ್ರಮದಲ್ಲಿ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋಟ್, ಮುಖ್ಯಮಂತ್ರಿ ಡಿ.ಕೆಶಿವಕುಮಾರ್ ಹಾಗೂ ನ್ಯಾಯಮೂರ್ತಿ ಅಬ್ದುಲ್ ನಜೀರ್ ಸೇರಿದಂತೆ ಗಣ್ಯರು ಉಪಸ್ಥಿತರಿದ್ದರು.

<><><>

ಲಂಡನ್‌ನ ಲಾರ್ಡ್ಸ್ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಸಿಸಿ ಮಹಿಳಾ ಟಿ-೨೦ ವಿಶ್ವಕಪ್ ಕ್ರಿಕೆಟ್‌ನ 'ಎ' ಗಂಪಿನ ಪಂದ್ಯದಲ್ಲಿ ಭಾರತ, ಆಸ್ಟ್ರೇಲಿಯಾ ತಂಡವನ್ನು ಎದುರಿಸಲಿದೆ. ಪಂದ್ಯ ಭಾರತೀಯ ಕಾಲಮಾನ ಸಂಜೆ ೭ ಗಂಟೆಗೆ ಆರಂಭವಾಗಲಿದೆ. ಹರ್ಮನ್‌ಪ್ರೀತ್ ಕೌರ್ ನೇತೃತ್ವದ ಭಾರತ ತಂಡ, ಆಡಿರುವ ನಾಲ್ಕು ಪಂದ್ಯಗಳಲ್ಲಿ ಮೂರು ಗೆಲುವುಗಳೊಂದಿಗೆ ಗುಂಪು 'ಎ' ಅಂಕಪಟ್ಟಿಯಲ್ಲಿ ಎರಡನೇ ಸ್ಥಾನದಲ್ಲಿದೆ. ಮತ್ತೊಂದೆಡೆ, ಆಸ್ಟ್ರೇಲಿಯಾ ತಂಡ ಆಡಿರುವ ಎಲ್ಲಾ ನಾಲ್ಕು ಪಂದ್ಯಗಳಲ್ಲೂ ಗೆಲುವು ಸಾಧಿಸಿ ಅಂಕಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದೆ. ಸೆಮಿಫೈನಲ್ ಪ್ರವೇಶವನ್ನು ಖಚಿತಪಡಿಸಿಕೊಳ್ಳುವ ಉದ್ದೇಶದಿಂದ ಭಾರತ ತಂಡ, ಇದುವರೆಗೆ ಅಜೇಯವಾಗಿರುವ ಆಸ್ಟ್ರೇಲಿಯಾ ವಿರುದ್ಧ ಗೆಲುವು ಸಾಧಿಸುವ ಗುರಿಯೊಂದಿಗೆ ಕಣಕ್ಕಿಳಿಯಲಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>